**ಅಸಲು ದಾವಾ ಸಂಖ್ಯೆ - 151/2015** **ಪಿ.ಡಬ್ಲ್ಯೂ:-1**

ದಿನಾಂಕಃ **09-07-2024** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲು :- 2 ನೇ ಪ್ರತಿವಾದಿ ಪರ ವಕೀಲರಿಂದ :-**

ನನ್ನ ತಾಯಿಯ ಹೆಸರು ರತ್ನಮ್ಮ. ನನ್ನ ತಾಯಿಗೆ ನಾವು **5** ಜನ ಮಕ್ಕಳು ಅಂದರೆ ದೇವೆಂದ್ರಪ್ಪ, ನಾಗರಾಜು, ಸುರೇಶ್, ಶಣ್ಮುಖಪ್ಪ ಮತ್ತು ಭಾಗ್ಯಮ್ಮ. ದಾವಾ ಆಸ್ತಿಯ ಖಾತೆ ಈಗಲೂ ನನ್ನ ತಾಯಿಯ ಹೆಸರಿನಲ್ಲಿದೆ ಎಂದರೆ ಸರಿ. ದಾವಾ ಆಸ್ತಿಯ ಖಾತೆ ಈಗಲೂ ನಮ್ಮ ತಾಯಿಯ ಹೆಸರಿನಲ್ಲಿದೆ. ದಾವಾ ಆಸ್ತಿಯ ಖಾತೆಯನ್ನು ನಮ್ಮ ತಾಯಿಯ ಹೆಸರಿನಿಂದ ನಮ್ಮ ಹೆಸರಿಗೆ ಮಾಡಿಕೊಂಡಿರುವುದಿಲ್ಲ. **2015** ನೇ ಸಾಲಿನಿಂದ ಇಲ್ಲಿಯವರೆಗೂ ದಾವಾ ಆಸ್ತಿಯಲ್ಲಿ ನಾವು ಸ್ವಾಧೀನದಲ್ಲಿರುವ ಬಗ್ಗೆ ನ್ಯಾಯಾಲಯಕ್ಕೆ ದಾಖಲಾತಿಗಳನ್ನು ಹಾಜರುಪಡಿಸಿದ್ದೇನೆ. ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಕಂದಾಯವನ್ನು ಕಟ್ಟಿದ್ದೇವೆ ಆದರೆ ಇ-ಸ್ವತ್ತನ್ನು ಪಡೆದುಕೊಂಡಿಲ್ಲ. ಪ್ರತಿವಾದಿಯ ತಾಯಿಯ ಹೆಸರು ಮತ್ತು ಅವರ ಅಣ್ಣ ತಮ್ಮಂದಿರು ಎಷ್ಟು ಜನ ಎಂಬ ವಿಚಾರ ನನಗೆ ಗೊತ್ತಿಲ್ಲ. ದಾವಾ ಆಸ್ತಿಯ ಖಾತೆ ಮತ್ತು ಪಹಣಿ ಪ್ರತಿವಾದಿಯ ಹೆಸರಿನಲ್ಲಿದೆ ಎಂದರೆ ಸರಿಯಲ್ಲ. ಇ ಸ್ವತ್ತನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ಯಾವುದೇ ತೊಂದರೆ ಇಲ್ಲ. ದಾವಾ ಆಸ್ತಿಯ ಮೇಲೆ ನಮಗೆ ಯಾವುದೇ ಹಕ್ಕು ಮತ್ತು ಹಿತಾಸಕ್ತಿ ಇಲ್ಲದ ಕಾರಣ ಪಂಚಾಯಿತಿಯವರು ಇ-ಸ್ವತ್ತನ್ನು ಕೊಟ್ಟಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಈ ಮೊದಲು ಪ್ರತಿವಾದಿಯ ತಾಯಿ ಸ್ವಾಧೀನದಲ್ಲಿದ್ದು ಈಗ ಪ್ರತಿವಾದಿ ಸ್ವಾಧೀನದಲ್ಲಿದ್ದಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯು ಕೃಷಿ ಭೂಮಿ ಆಗಿದ್ದು ಮತ್ತು ಅದರ ಖಾತೆ ಮತ್ತು ಪಹಣಿ ಪ್ರತಿವಾದಿಗಳ ಹೆಸರಿನಲ್ಲಿದೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ನನಗೆ ಯಾವುದೇ ಹಕ್ಕು ಮತ್ತು ಹಿತಾಸಕ್ತಿ ಇರುವುದಿಲ್ಲ ಎಂದರೆ ಸರಿಯಲ್ಲ. ಈ ದಾವೆಯನ್ನು ಸಲ್ಲಿಸಲು ಯಾವುದೇ ವ್ಯಾಜ್ಯಾ ಕಾರಣಗಳು ಉಂಟಾಗದಿದ್ದರೂ ಸಹ ಪ್ರತಿವಾದಿಗಳಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ

ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ನನಗೆ ಯಾವುದೇ ಹಕ್ಕು ಮತ್ತು ಹಿತಾಸಕ್ತಿ ಇಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಕಂದಾಯ ರಶೀದಿಗಳನ್ನು ನಾನು ಹಾಜರುಪಡಿಸಿದ್ದೇನೆ. ನಿಪಿ-**5** ಕಂದಾಯ ರಶೀದಿಯನ್ನು ಹೊರತುಪಡಿಸಿ ಯಾವುದೇ ಕಂದಾಯ ರಶೀದಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿ ಕೃಷಿ ಭೂಮಿ ಆಗಿದ್ದರು ಸಹ ಕೃಷೇತ್ತರ ಆಸ್ತಿ ಆಗಿದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-**1** ರಿಂದ **5** ದಾಖಲೆಗಳನ್ನು ಈ ದಾವೆಯನ್ನು ಸಲ್ಲಿಸುವ ಸಲುವಾಗಿ ನಾನೇ ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.